ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1269(1770)
ವಿಧಾನ ಸಭಾ ಸದಸ್ಯರ ಹೆಸರು : ಶ್ರೀ ಕೃಷ್ಣ ಪಾಲೇಮಾರ್.ಜೆ.(ಸೂರತ್ಕಲ್)
ಉತ್ತರಿಸುವವರು : ಶ್ರೀ ಹೆಚ್.ಕೆ.ಕುಮಾರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು)

ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನೆಯ ಮೂಲಕ ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಇಲಾಖಾ ಯೋಜನೆಗಳ ಸೌಲಭ್ಯವನ್ನು ಒದಗಿಸಲಾಗಿದೆ?

2006–07 ನೇ ಸಾಲಿನಲ್ಲಿ ದಕ್ಷಿಣಕನ್ನಡ ಜಿಲ್ಲೆಯಲ್ಲಿ ಇಲಾಖೆಯಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನೆಗಳ ಮೂಲಕ ಸೌಲಭ್ಯ ಒದಗಿಸಿರುವ ಫಲಾನುಭವಿಗಳ ವಿವರ ಕೆಳಕಂಡಂತೆ ಇದೆ.

ಯೋಜನೆಗಳ ಹೆಸರು	ಫಲಾನುಭವಿಗಳ ಸಂಖ್ಯೆ
ಸಾಂತ್ವನ	60
ಗ್ರಾಮೀಣ ಪ್ರದೇಶದ ಹೆಣ್ಣು ಮಕ್ಕಳಿಗೆ ಹಾಜರಾತಿ ಶಿಷ್ಯವೇತನ	16
ವೃತ್ತಿ ಶಿಕ್ಷಣ ಪಡೆಯುತ್ತಿರುವ ಹೆಣ್ಣು ಮಕ್ಕಳಿಗೆ ಸಹಾಯಧನ ಯೋಜನೆ	30
ಕಾನೂನು ಪದವಿ ಪಡೆದ ಮಹಿಳೆಯರಿಗೆ ಸಹಾಯಧನ	4
ನಿರ್ಗತಿಕ ಮಕ್ಕಳ ಕುಟೀರ	450
ಪ್ರಾಯೋಜಿತ ಕಾರ್ಯಕ್ರಮ	10
ಸ್ತ್ರೀ ಶಕ್ತಿ ಗುಂಪುಗಳು	52,109
ಹೊಯ್ಸಳ, ಕೆಳದಿ ಚೆನ್ನಮ್ಮ ಪ್ರಶಸ್ತಿ	2
ಸಂಕಷ್ಟ ಪರಿಸ್ಥಿತಿಯಲ್ಲಿರುವ ಮಕ್ಕಳ ವಿದ್ಯಾರ್ಥಿ ವೇತನ	33
ಭಾಗ್ಯಲಕ್ಷ್ಮಿ ಯೋಜನೆ	2532
ಕಿಲೋರಿ ಶಕ್ತಿ ಯೋಜನೆ	1080
ಸಮಗ್ರ ಶಿಶು ಅಭಿವೃದ್ಧಿ ಯೋಜನೆ ವಿಶೇಷ ಪೌಷ್ಟಿಕ ಆಹಾರ ಯೋಜನೆ– 6 ವರ್ಷದೊಳಗಿನ ಮಕ್ಕಳು ಗರ್ಭಿಣಿಯರು ಹಾಗೂ ಬಾಣಂತಿಯರು.	1,18,676

ಆ) ಮಕ್ಕಳ ಸುರಕ್ಷತೆಗಾಗಿ ಕೈಗೊಂಡ ಕ್ರಮಗಳೇನು?

ರಕ್ಷಣೆ ಮತ್ತು ಪೋಷಣೆಯ ಅಗತ್ಯವಿರುವ ಮಕ್ಕಳಿಗೆ ಬಾಲ ಮಂದಿರಗಳಲ್ಲಿ ಆಶ್ರಯ ನೀಡಲಾಗುತ್ತಿದೆ. ಕಾನೂನಿನ ಜೊತೆ ಸಂಘರ್ಷಕ್ಕೆ ಒಳಗಾದ ಮಕ್ಕಳನ್ನು ವೀಕ್ಷಣಾಲಯಗಳಲ್ಲಿ ದಾಖಲು ಮಾಡಿಕೊಳ್ಳಲಾಗುತ್ತಿದೆ. ಏಕ ಪೋಷಕರು ಮತ್ತು ಅನಾಥ ಮಕ್ಕಳನ್ನು ನಿರ್ಗತಿಕ ಮಕ್ಕಳ ಕುಟೀರದಲ್ಲಿ ದಾಖಲು ಮಾಡಲಾಗುತ್ತಿದೆ. ಸಂಕಷ್ಟದಲ್ಲಿ ಮತ್ತು ಸಹಾಯ ಬೇಕಾದ ಮಕ್ಕಳಿಗೆ ಚೈಲ್ಡ್‌ಲೈನ್ ಕೆಲಸ ನಿರ್ವಹಿಸುತ್ತಿದೆ.ಮಕ್ಕಳ ಸುರಕ್ಷತೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ವಿವಿಧ ಇಲಾಖೆಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ 2003-10ರವರೆಗೆ ಮಕ್ಕಳ ಕ್ರಿಯಾ ಯೋಜನೆಯನ್ನು ರೂಪಿಸಲಾಗಿರುತ್ತದೆ.ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಪೌಷ್ಟಿಕತೆಯನ್ನು ಹೆಚ್ಚಿಸುವುದು, ಶಿಶು ಮರಣ ಪ್ರಮಾಣ ಕಡಿಮೆ ಮಾಡುವುದು, ಔಪಚಾರಿಕ ಶಿಕ್ಷಣಕ್ಕೆ ಮಕ್ಕಳನ್ನು ಸಿದ್ಧಗೊಳಿಸುವುದು, ಮಗುವಿನ ಸರ್ವತೋಮುಖ ಬೆಳವಣಿಗೆಗೆ ಭದ್ರ ಅಡಿಪಾಯ ಹಾಕುವ ನಿಟ್ಟಿನಲ್ಲಿ ಕ್ರಮವಹಿಸಲಾಗುತ್ತಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1270(1771)
ಸದಸ್ಯರ ಹೆಸರು : ಶ್ರೀ ಕೃಷ್ಣ ಪಾಲೇಮಾರ್.ಜೆ. (ಸೂರತ್ಕಲ್)
ಉತ್ತರಿಸುವವರು : ಶ್ರೀ ಗೋವಿಂದ.ಎಂ.ಕಾರಜೋಳ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು)

ಅ) ಪಡಿತರ ಚೀಟಿಗಳನ್ನು ಯಾವ ಯಾವ ಕಾರಣಗಳಿಗಾಗಿ ದಾಖಲೆಗಳನ್ನಾಗಿ ಬಳಸಿಕೊಳ್ಳಲು ಸರ್ಕಾರ ಅನುವು ಮಾಡಿಕೊಟ್ಟಿದೆ;

ಪಡಿತರ ಚೀಟಿಗಳನ್ನು ಪಡಿತರವನ್ನು ಪಡೆಯಲು ಮಾತ್ರ ನೀಡಲಾಗಿರುತ್ತದೆ.

ಆ) ಯಾವ ಯಾವ ಇಲಾಖೆಗಳ ಯೋಜನೆಗಳ ಅನುಷ್ಠಾನದಲ್ಲಿ ಪಡಿತರ ಕಾರ್ಡ್‌ಗಳನ್ನು ದಾಖಲೆ ಗಳನ್ನಾಗಿ ಬಳಸಿಕೊಳ್ಳುತ್ತಿವೆ;

ಪಡಿತರ ಚೀಟಿಗಳನ್ನು ಯಾವ ಕಾರಣಕ್ಕಾಗಿ ನೀಡಲಾಗಿದೆಯೋ ಆ ಉದ್ದೇಶವನ್ನು ಬಿಟ್ಟು ಬೇರೆ ಯಾವುದಕ್ಕೂ ಅದನ್ನು ಒದಗಿಸಬೇಕೆಂಬ ಒತ್ತಾಯ ಕೈಬಿಡಲು ಇಲಾಖೆಗಳಿಗೆ ಸುತ್ತೋಲೆ ನೀಡಲಾಗಿರುತ್ತದೆ. ಆದಾಗ್ಯೂ ಎಲ್ಲಾ